# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 17/04/2021 ರ
# ಸಭಾ ನಡವಳಿ

ದಿನಾಂಕ: 17/04/2021 ರಂದು ಬೆಳಿಗ್ಗೆ 11.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

ಹಾಜರಿದ್ದವರು:

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ರವಿಚಂದ್ರಚಾರಿ ಟಿ.ಕೆ | ಹಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ. |
| 3 | ಶ್ರೀಮತಿ ಮೋನಿಕ ಎಸ್.ಡಿ | ಕಿರಿಯ ಆರೋಗ್ಯ ಪರಿವೀಕ್ಷಕರು ಬಿ.ಬಿ.ಎಂ.ಪಿ. |
| 4 | ಶ್ರೀ ಎ.ಎಸ್. ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |

ನೋಡಲ್ ಅಧಿಕಾರಿಯವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ

Scanned with CamScanner

ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಕೋವಿಡ್ ಸಂಬಂಧ ತುರ್ತು ಸಭೆಯನ್ನು ನಡೆಸಲಾಯಿತು.

1. **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು.

ಮುಂದುವರೆದು ಕೋವಿಡ್-19ರ ಪ್ರಕರಣಗಳು ಹೆಚ್ಚಾಗಿ ಉಲ್ಬಣಿಸುತ್ತಿದ್ದು, ಪ್ರತಿದಿನ ರಾಜ್ಯಾದ್ಯಂತ 30 ರಿಂದ 40 ಸಾವಿರ ಪ್ರಕರಣಗಳು ಪತ್ತೆಯಾಗುತ್ತಿರುತ್ತದೆ. ಮುಖ್ಯವಾಗಿ ಬೆಂಗಳೂರು ನಗರದಲ್ಲಿ ಕೋವಿಡ್-19 ವ್ಯಾಪಕವಾಗಿ ಹರಡುತ್ತಿದ್ದು, ಕೋವಿಡ್ ಸೋಂಕಿತರಿಗೆ ವೈದ್ಯಕೀಯ ವ್ಯವಸ್ಥೆ ಹಾಗೂ ಬೆಡ್‌ಗಳ ವ್ಯವಸ್ಥೆ ಕಲ್ಪಿಸುವುದು ಕಷ್ಟಕರವಾಗಿರುತ್ತದೆ. ಈ ಸಂಬಂಧ ಪ್ರತಿ ವಾರ್ಡ್‌ನಲ್ಲಿ ಒಂದರಂತೆ ಟ್ರಯೇಜ್ ಸೆಂಟರ್‌ನ್ನು ತೆರೆದು ಆಯಾ ವಾರ್ಡ್‌ಗಳಲ್ಲಿ ಕಂಡುಬರುವ ಕೋವಿಡ್ ಸೋಂಕಿತರನ್ನು ಕರೆತಂದು ಪ್ರಥಮ ಚಿಕಿತ್ಸೆಯನ್ನು ನೀಡಿ, ಸದರಿ ರೋಗಿಯ ರೋಗದ ಗಂಭೀರತೆಯನ್ನು ಕಂಡುಕೊಂಡು ಹೋಮ್ ಐಸೋಲೇಷನ್ ಮಾಡುವ ಅಥವಾ ಹೆಚ್ಚಿನ ಚಿಕಿತ್ಸೆಗಾಗಿ ಕೋವಿಡ್ ಸೆಂಟರ್ ಆಸ್ಪತ್ರೆಗಳಿಗೆ ಸ್ಥಳಾಂತರಿಸುವ ಕಾರ್ಯವನ್ನು ಹಮ್ಮಿಕೊಳ್ಳಬೇಕಾಗಿದ್ದು ಸೂಕ್ತ ಕಟ್ಟಡವನ್ನು ಗುರುತಿಸಲು ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಸೂಚಿಸಿ ಸಾರ್ವಜನಿಕರಲ್ಲಿ ಕೋರಲಾಯಿತು.

ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೋವಿಡ್ ಲಸಿಕೆಗಳು ಉಚಿತವಾಗಿ ನೀಡಲಾಗುತ್ತಿದ್ದು, ನಾಗರೀಕರು ಮೊದಲನೇ ಹಾಗೂ ಎರಡನೇ ಡೋಸ್‌ನ್ನು ನಿಗಧಿತ ಸೂಕ್ತ ಸಮಯದಲ್ಲಿ ಪಡೆಯಲು ಹಾಗೂ ಕೋವಿಡ್-19 ರೋಗವನ್ನು ಹರಡುವುದನ್ನು ತಪ್ಪಿಸಲು ಸಾರ್ವಜನಿಕರಲ್ಲಿ ಮನವಿ ಮಾಡಲಾಯಿತು.

Scanned with CamScanner

2. <u>ಘನತ್ಯಾಜ್ಯ ನಿರ್ವಹಣೆ</u>:-ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಪ್ರದೇಶಗಳಲ್ಲಿ ಸಮರ್ಪಕವಾಗಿ ಘನತ್ಯಾಜ್ಯ ವಿಲೇವಾರಿಯನ್ನು ಮಾಡಬೇಕಾಗಿ ಸೂಚಿಸಲಾಯಿತು. ಪ್ರಸ್ತುತ ಕೋವಿಡ್-19ರ ಪ್ರಕರಣಗಳು ಹೆಚ್ಚಾಗಿ ಹರಡುತ್ತಿರುವುದರಿಂದ ಪೌರಕಾರ್ಮಿಕರು ಹಾಗೂ ಇತರರು ಗ್ಲೌಸ್ ಹಾಗೂ ಮಾಸ್ಕನ್ನು ಕಡ್ಡಾಯವಾಗಿ ಧರಿಸಲು ಮತ್ತು ಸ್ಯಾನಿಟೈಜರ್‌ನ್ನು ಉಪಯೋಗಿಸಲು ಸೂಚಿಸಲಾಯಿತು.

3. <u>ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ</u>:- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಕೆಲವು ರಸ್ತೆಗಳಲ್ಲಿ ರಸ್ತೆಗುಂಡಿಗಳು ಉಂಟಾಗಿದ್ದು, ಸದರಿ ರಸ್ತೆಗುಂಡಿಗಳನ್ನು ತುರ್ತಾಗಿ ಮುಚ್ಚಲು ಸಭೆಯಲ್ಲಿ ಕೋರಲಾಯಿತು. ನೋಡಲ್ ಅಧಿಕಾರಿಗಳು ಮಾತನಾಡಿ ಈ ಸಂಬಂಧ ವಾರ್ಡ್‌ನ ಇಂಜಿನಿಯರ್‌ರವರ ಜೊತೆ ಮಾತನಾಡಿ ಸೂಕ್ತ ಕ್ರಮಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್-198, ಹೆಮ್ಮಿಗೆಪುರ

ಪ್ರತಿಯನ್ನು:-

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಚೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner